ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 11–10–2017

ಪತ್ರಿಕಾ ಪ್ರಕಟಣೆ

ಸಂಖ್ಯೆ 176/296

# ರಾಜ್ಯದ ಎಲ್ಲಾ ಕೇಂದ್ರ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಜನವರಿ 1 ರಿಂದ ಇಂದಿರಾ ಕ್ಯಾಂಟೀನ್ ಪ್ರಾರಂಭ : ಟಿ ಬಿ ಜಯಚಂದ್ರ

ಬೆಂಗಳೂರು, ಅಕ್ಟೋಬರ್ 11, ( ಕರ್ನಾಟಕ ವಾರ್ತೆ) :

ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳು ಮಾತ್ರವಲ್ಲದೆ, ಒಂದು ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಪಟ್ಟಣಗಳಲ್ಲೂ ಬೆಂಗಳೂರು ಮಾದರಿಯಲ್ಲಿಯೇ ಜನವರಿ 1 ರಿಂದ ಇಂದಿರಾ ಕ್ಯಾಂಟೀನ್‌ಗಳನ್ನು ಪ್ರಾರಂಭಿಸಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನವನ್ನು ಕೈಗೊಳ್ಳಲಾಗಿದೆ ಎಂದು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ ಬಿ ಜಯಚಂದ್ರ ಅವರು ಪತ್ರಿಕಾ ಗೋಷ್ಠಿಯಲ್ಲಿ ಪ್ರಕಟಿಸಿದರು.

ಶ್ರಮಿಕ ವರ್ಗದವರಿಗೆ ರಿಯಾಯಿತಿ ದರದಲ್ಲಿ ಆಹಾರ ಒದಗಿಸುವ ಮಹತ್ವಯುತ ಈ ಯೋಜನೆಯ ಅನುಷ್ಠಾನಕ್ಕೆ ನವೆಂಬರ್ ತಿಂಗಳ ಅಂತ್ಯದೊಳಗೆ ಸೂಕ್ತ ಸ್ಥಳ ಗುರುತಿಸಬೇಕು ಹಾಗೂ ಡಿಸೆಂಬರ್ ಮಾಸಾಂತ್ಯದೊಳಗೆ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಬೇಕು ಜನ ದಟ್ಟಣೆ ಇರುವ ಎಂದು ಸಂಪುಟ ಪೌರಾಡಳಿತ ನಿರ್ದೇಶನಾಲಯಕ್ಕೆ ಸೂಚಿಸಿದೆ. ಅತ್ಯಧಿಕ ಜನ ದಟ್ಟಣೆ ಇರುವ ಆಸ್ಪತ್ರೆಗಳ ಆವರಣ, ಬಸ್ ನಿಲ್ದಾಣ ಹಾಗೂ ರೈಲ್ವೇ ನಿಲ್ದಾಣಗಳಲ್ಲಿ ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲು ಸೂಚಿಸಲಾಗಿದೆ. ರಾಜ್ಯದ 171 ಸ್ಥಳಗಳಲ್ಲಿನ 246 ಕೇಂದ್ರಗಳಲ್ಲಿ ಜನವರಿ 1 ರಂದು ಇಂದಿರಾ ಕ್ಯಾಂಟೀನ್‌ಗಳು ಪ್ರಾರಂಭವಾಗಲಿವೆ. ಇದಕ್ಕಾಗಿ ಪ್ರತಿ ದಿನಕ್ಕೆ 29 ಲಕ್ಷ ರೂ ನಂತೆ ಪ್ರತಿ ಮಾಹೆಗೆ ಸುಮಾರು ಒಂಭತ್ತು ಕೋಟಿ ರೂ ಸಹಾಯ ಧನ ಬಿಡುಗಡೆಗೆ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವರು ತಿಳಿಸಿದರು.

**ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ**

ನವೆಂಬರ್ 13 ರಿಂದ ಹತ್ತು ದಿನಗಳ ಕಾಲ ಬೆಳಗಾವಿಯ ಸುವರ್ಣ ಸೌಧದಲ್ಲಿ ರಾಜ್ಯ ವಿಧಾನ ಮಂಡಲದ ಚಳಿಗಾಲದ ಅಧಿವೇಶನವು ನಡೆಸಲು ಸಂಪುಟ ತೀರ್ಮಾನಿಸಿದೆ.

ಮುಖ್ಯಮಂತ್ರಿಯವರ ಅನಿಲ ಭಾಗ್ಯ

ಕೇಂದ್ರ ಸರ್ಕಾರದ ಉಜ್ವಲ ಯೋಜನೆಯ ವ್ಯಾಪ್ತಿಗೆ ಒಳಪಡದ ಫಲಾನುಭವಿಗಳಿಗೆ ಮುಖ್ಯಮಂತ್ರಿಯವರ ಅನಿಲ ಭಾಗ್ಯ ಯೋಜನೆಯಡಿ 4040 ರೂ ವೆಚ್ಚದಲ್ಲಿ ಎರಡು ಒಲೆಗಳ ಸ್ಟೌವ್ ಒದಗಿಸಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ. ರಾಜ್ಯದಲ್ಲಿ 28 ಲಕ್ಷ ಫಲಾನುಭವಿ ಕುಟುಂಬಗಳು ಒಳಪಡುವ ಈ ಯೋಜನೆಯ ಸೌಲಭ್ಯವನ್ನು 2018 ರ ಮಾರ್ಚ್ ಅಂತ್ಯದೊಳಗೆ ಹತ್ತು ಲಕ್ಷ ಫಲಾನುಭವಿಗಳಿಗೆ ವಿಸ್ತರಿಸಲು ಯೋಜಿಸಲಾಗಿದೆ. ಇದಕ್ಕಾಗಿ ಈ ಯೋಜನೆಗೆ 1137 ಕೋಟಿ ರೂ ಅನುದಾನ ಬಿಡುಗಡೆ ಮಾಡಲು ಸಂಪುಟ ನಿರ್ಣಯಿಸಿದೆ.

ಪುರ್ನಬೆಳಕು

ಅದೇ ರೀತಿ ಸೀಮೆ ಎಣ್ಣೆ ಆಧ್ಯಾರ್ಪಣೆ ಮಾಡುವ ಕುಟುಂಬಗಳಿಗೆ ಉಚಿತ ಎಲ್ ಇ ಡಿ ಬಲ್ಬ್ ವಿಸ್ತರಿಸುವ ಯೋಜನೆಗೂ ಸಂಪುಟ ಅನುಮೋದನೆ ನೀಡಿದೆ.

ಡಿ ಎನ್ ಬಿ ಕೋರ್ಸ್‌ಗೆ ಒಪ್ಪಿಗೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ತಜ್ಞ ವೈದ್ಯರ ಕೊರತೆಯನ್ನು ನೀಗಿಸಲು ಸೇವಾ ನಿರತ ವೈದ್ಯರಿಗೆ ಬೆಂಗಳೂರಿನ ಕೆ. ಜಿ. ಜನರಲ್ ಮತ್ತು ಜಯನಗರ ಸಾರ್ವಜನಿಕ ಆಸ್ಪತ್ರೆ, ಬಾಗಲಕೋಟೆ, ಬಳ್ಳಾರಿ, ಚಿತ್ರದುರ್ಗ, ಧಾರವಾಡ, ಕೋಲಾರ, ಕಲಬುರಗಿ, ತುಮಕೂರು ಹಾಗೂ ವಿಜಯಪುರ ಒಳಗೊಂಡಂತೆ ರಾಜ್ಯದ 10 ಜಿಲ್ಲಾ ಆಸ್ಪತ್ರೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ವೈದ್ಯಕೀಯ ಸೇವೆಗೆ ಅನುಕೂಲವಾಗುವ ಮೂರು ವರ್ಷದ ಸ್ನಾತಕೋತ್ತರ ಡಿಪ್ಲೋಮೇಟ್ ಇನ್ ನ್ಯಾಷನಲ್ ಬೋರ್ಡ್ ಕೋರ್ಸ್‌ಗಳನ್ನು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ಸಂಪನ್ಮೂಲದಿಂದ ಪ್ರಾರಂಭಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಆಂಬುಲೆನ್ಸ್ ಖರೀದಿಗೆ ಸಮ್ಮತಿ

ಆರೋಗ್ಯ ಕವಚ ಯೋಜನೆಯ ಹಳೆಯ 95 ಆಧುನಿಕ ಜೀವ ರಕ್ಷಕ ವ್ಯವಸ್ಥೆ ( ಅಡ್ವಾನ್ಸ್ ಲೈಫ್ ಸಪೋರ್ಟರ್ಸ್ ) ಮತ್ತು 276 ಮೂಲ ಜೀವ ರಕ್ಷಕ ವ್ಯವಸ್ಥೆ

( ಬೇಸಿಕ್ ಲೈಫ್ ಸಪೋರ್ಟರ್ಸ್ ) ಆಂಬುಲೆನ್ಸ್‌ಗಳನ್ನು ಬದಲಾಯಿಸಿ 61.78 ಕೋಟಿ ರೂ ವೆಚ್ಚದಲ್ಲಿ ಸುಸಜ್ಜಿತ ಆಂಬುಲೆನ್ಸ್‌ಗಳನ್ನು ಖರೀದಿಸಲು ಸಚಿವ ಸಂಪುಟ ಸಮ್ಮತಿಸಿದೆ.

ಜಾಗೃತಿ ಸಮಿತಿಗಳ ಸಂಯೋಜಕರಿಗೆ ಗೌರವ ಧನ

ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿ ಹಂತದಲ್ಲಿ ಜಾಗೃತಿ ಸಮಿತಿಗಳ ಮೂಲಕ ನ್ಯಾಯಬೆಲೆ ಅಂಗಡಿಗಳ ಕಾರ್ಯ ನಿರ್ವಹಣೆಯ ಸಾಮಾಜಿಕ ಪರಿಶೋಧನೆ ಕೈಗೊಳ್ಳಲು ತರಬೇತಿಯಲ್ಲಿ ಪಾಲ್ಗೊಳುವ ತಾಲ್ಲೂಕು ಸಂಯೋಜಕರಿಗೆ 150 ರೂ ಹಾಗೂ ಗ್ರಾಮ ಸಂಯೋಜಕರಿಗೆ 75 ರೂ ಗೌರವ ಧನ ನೀಡಲು ಅನುಕೂಲವಾಗುವಂತೆ ಪ್ರಸ್ತುತ ಸರ್ಕಾರ ಹೊರಡಿಸಿರುವ ಆದೇಶಕ್ಕೆ ಕೆಲವು ಮಾರ್ಪಾಡು ಮಾಡಲು  ರಾಜ್ಯ ಸಂಪುಟ ಅನುಮೋದನೆ ನೀಡಿದೆ.

ಲೇಖನ ಸಾಮಗ್ರಿ ಖರೀದಿಸಲು ಒಪ್ಪಿಗೆ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆಯುತ್ತಿರುವ 40,765 ವಿದ್ಯಾರ್ಥಿಗಳಿಗೆ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ಸ್ ಮೂಲಕ ಲೇಖನ ಸಾಮಗ್ರಿಗಳನ್ನು ಖರೀದಿಸಿ ವಿತರಿಸಲು ಸಂಪುಟ ಒಪ್ಪಿಗೆ ನೀಡಿದೆ.

ಟೂಲ್ ಕಿಟ್ ವಿತರಣೆಗೆ ಅನುಮೋದನೆ

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿಯೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್‌ಗಳನ್ನು ವಿತರಿಸಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಅದೇ ವರ್ಗದ ವಿದ್ಯಾರ್ಥಿಗಳಿಗೆ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ಸ್ ಮೂಲಕ ಟೂಲ್ ಕಿಟ್‌ಗಳನ್ನು ಉಚಿತವಾಗಿ ವಿತರಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮೆಕ್ಯಾನಿಕಲ್ ಉಪಕರಣಗಳನ್ನು ಖರೀದಿಸಲು ಒಪ್ಪಿಗೆ

ರಾಜ್ಯದ 46 ಸರ್ಕಾರಿ ಐ ಟಿ ಐ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು 20.27 ಕೋಟಿ ರೂ. ಅಂದಾಜು ವೆಚ್ಚದಲ್ಲಿ 26 ವಿವಿಧ ಮೆಕ್ಯಾನಿಕಲ್ ಉಪಕರಣಗಳನ್ನು ಖರೀದಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. 46 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 16.30 ಕೋಟಿ ರೂ. ಅಂದಾಜು ವೆಚ್ಚದಲ್ಲಿ 127 ವಿವಿಧ ವಿದ್ಯುತ್ ಮತ್ತು ವಿದ್ಯುನ್ಮಾನ ಉಪಕರಣಗಳನ್ನು ಖರೀದಿಸಲು ಸಚಿವ ಸಂಪುಟ ಸಮ್ಮತಿಸಿದೆ.

ಗುತ್ತಿಗೆ ದರದಲ್ಲಿ ಕಡಿತ

ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ದಾವಣಗೆರೆ ಡೆಂಟಲ್ ಚಾರಿಟಬಲ್ ಟ್ರಸ್ಟ್‌ಗೆ ದಾವಣಗೆರೆಯ ಜೆ ಹೆಚ್ ಪಟೇಲ್ ಬಡಾವಣೆಯಲ್ಲಿ 15,000 ಚದರಡಿ ವಿಸ್ತೀರ್ಣದ ಜಾಗವನ್ನು ನೀಡುವ ಗುತ್ತಿಗೆ ದರವನ್ನು ಶೇಕಡಾ 50 ರಷ್ಟು ಕಡಿಮೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ.

ರಿಯಾಯಿತಿ ಗುತ್ತಿಗೆ ದರದಲ್ಲಿ ಜಾಗ

ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ಮಡಿವಾಳ ಮಾಚಿದೇವ ಸಂಘಕ್ಕೆ ಖಾಸಗೀ ವಸತಿ ಬಡಾವಣೆಯಲ್ಲಿನ 4465 ಚದರಡಿ ವಿಸ್ತೀರ್ಣದ ಜಾಗವನ್ನು ಚದರ ಅಡಿಗೆ 10 ರೂ ರಿಯಾಯಿತಿ ಗುತ್ತಿಗೆ ದರದಂತೆ ಒದಗಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ದಾವಣಗೆರೆ ಜಿಲ್ಲಾ ಒಕ್ಕಲಿಗರ ಸಂಘಕ್ಕೂ ದಾವಣಗೆರೆಯ ಆವರೆಗೆರೆ ಗ್ರಾಮದ ಖಾಸಗೀ ಬಡಾವಣೆಯಲ್ಲಿನ 21,418 ಚದರಡಿ ವಿಸ್ತೀರ್ಣದ ನಾಗರೀಕ ಸೌಲಭ್ಯ ನಿವೇಶನವನ್ನು ಶೇಕಡಾ 10 ರ ರಿಯಾಯತಿ ದರದಲ್ಲಿ ನೀಡಲು ಸಚಿವ ಸಂಪುಟ ಅನುಮತಿ ನೀಡಿದೆ.

ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆಯಡಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ ಹಾಗೂ ರೈತ ಉತ್ಪಾದಕರ ಸಂಸ್ಥೆಗಳ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಹಾವೇರಿ ಜಿಲ್ಲೆಯ ಹಿರೆಕೆರೂರು ತಾಲ್ಲೂಕಿನ ಹಿರೆಕೆರೂರು ಪಟ್ಟಣದ ದುರ್ಗಾದೇವಿ ಕೆರೆ ಹಾಗೂ ಬಹುಗ್ರಾಮ ಕೆರೆಗಳಿಗೆ ಕುಮದ್ವತಿ ನದಿಯಿಂದ ಅಂದಾಜು 24 ಕೋಟಿ ರೂ. ವೆಚ್ಚದಲ್ಲಿ ನೀರನ್ನು ತುಂಬಿಸುವ ಯೋಜನಾ ವರದಿಗೆ ಸಂಪುಟ ಆಡಳಿತಾತ್ಮಕ ಅನುಮತಿ ನೀಡಿದೆ.

ಹಿರೆಕೆರೂರು ತಾಲ್ಲೂಕಿನ 13 ಕೆರೆ ಹಾಗೂ ಬ್ಯಾಡಗಿ ತಾಲ್ಲೂಕಿನ 2 ಕೆರೆಗಳಿಗೆ ವರದಾ ನದಿಯಿಂದ ನೀರನ್ನು ಎತ್ತಿ ತುಂಬಿಸುವ 38 ಕೋಟಿ ರೂ ಅಂದಾಜು ವೆಚ್ಚದಲ್ಲಿ ಗುಡ್ಡದ ಮಲ್ಲಾಪುರ್ ಜೊತೆ ನೀರಾವರಿ ಯೋಜನೆ ವಿವರವಾದ ಕ್ರಿಯಾ ಯೋಜನೆಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮಾಸ್ಟರ್ ಪ್ಲಾನ್‌ಗೆ ಸಮ್ಮತಿ

ವಿಜಯಪುರ ಮಹಾನಗರ ಪಾಲಿಕೆಯ ಮಾಸ್ಟರ್ ಪ್ಲಾನ್ ಅನ್ವಯ ಅದರ ವ್ಯಾಪ್ತಿಯಲ್ಲಿ ಕೈಗೊಂಡ ರಸ್ತೆ ಅಭಿವೃದ್ಧಿ ಕಾಮಗಾರಿಗಳಲ್ಲಿ ಭೂ ಸ್ವಾಧೀನಪಡಿಸಿಕೊಂಡಿರುವ ಆಸ್ತಿಗಳ ಮಾಲೀಕರಿಗೆ ನೂತನ ಮಾರ್ಗಸೂಚಿಯನ್ವಯ ಪರಿಹಾರ ನೀಡಲು ಸಂಪುಟ ಸಮ್ಮತಿಸಿ ಸೂಚಿಸಿದೆ.

ಹೊಸ ತಾಲ್ಲೂಕಾಗಿ ಮೂಡಲಗಿ

ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲ್ಲೂಕಿನ ಮೂಡಲಗಿ ಪಟ್ಟಣವನ್ನು ಹೊಸ ತಾಲ್ಲೂಕನ್ನಾಗಿ ರಚಿಸಲು ಸಂಪುಟವು ತೀರ್ಮಾನಿಸಿದೆ.

ರಾಮನಗರ ಜಿಲ್ಲೆ ಮತ್ತು ತಾಲ್ಲೂಕು, ಬಿಡದಿ ಹೋಬಳಿಯ ಕಾಕರಾಮನ ಹಳ್ಳಿ, ಬೋರೆ ಹಳ್ಳಿ ಮತ್ತು ಕರೇನಹಳ್ಳಿ ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿ ವಸತಿ ಯೋಜನೆಗಾಗಿ ಭೂ ಸ್ವಾಧೀನ ಪಡಿಸಿಕೊಂಡ ಜಮೀನಿನ ಮಾಲಿಕರಿಗೆ ಸಾಂತ್ವನ ನಿವೇಶನ ನೀಡುವ ಯೋಜನೆಗೆ ಸಚಿವ ಸಂಪುಟ ಸಮ್ಮತಿಸಿದೆ ಎಂದು ಸಚಿವ ಜಯಚಂದ್ರ ತಿಳಿಸಿದರು.

************

ಡಿ ಪಿ ಎಂ

<u>ಸಂಖ್ಯೆ 177/297</u>

# <u>ಸವಿರುಚಿ  ಸಂಚಾರಿ ಕ್ಯಾಂಟೀನ್</u>
# <u>ನವೆಂಬರ್ 1 ರಿಂದ ಬೆಂಗಳೂರಿನಲ್ಲಿ ಪ್ರಾಯೋಗಿಕ ಆರಂಭ</u>

**ಬೆಂಗಳೂರು, ಅಕ್ಟೋಬರ್ 11 ( ಕರ್ನಾಟಕ ವಾರ್ತೆ) :**

**ಮುಖ್ಯಮಂತ್ರಿಯವರು 2017-18ನೇ ಆಯವ್ಯಯದಲ್ಲಿ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಜಿಲ್ಲಾ ಒಕ್ಕೂಟಗಳಿಗಾಗಿ ಘೋಷಿಸಿರುವ ಸವಿರುಚಿ ಸಂಚಾರಿ ಕ್ಯಾಂಟೀನ್‌ನ್ನು ಪ್ರಾಯೋಗಿಕವಾಗಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ನವೆಂಬರ್ 1 ರಿಂದ ಪ್ರಾರಂಭಿಸಲಾಗುವುದು ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಅಧ್ಯಕ್ಷೆ ಶ್ರೀಮತಿ ಭಾರತಿ ಶಂಕರ್ ಅವರು ತಿಳಿಸಿದರು.**

**ಈ ನಿಟ್ಟಿನಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ಸ್ತ್ರೀಶಕ್ತಿ ಒಕ್ಕೂಟಗಳಿಗೆ ಪೂರ್ವಭಾವಿ ಸಿದ್ಧತೆ ಹಾಗೂ ಯೋಜನಾ ಅನುಷ್ಠಾನ ಕುರಿತು ಅಕ್ಟೋಬರ್ 9 ರಿಂದ ಮೂರು ದಿನಗಳ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು ಇಂದು ಸಮಾರೋಪ ಸಮಾರಂಭ ನಡೆಯಲಿದೆ ಎಂದು ಹೇಳಿದರು.**

**ಈ ಕುರಿತು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸವಿರುಚಿ ಸಂಚಾರಿ ಕ್ಯಾಂಟೀನ್‌ನ್ನು ಪ್ರಾರಂಭಿಸಿ, ಮುನ್ನಡೆಸಲು ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಪರಿಣಿತಿ ಹೊಂದಿರುವ ಸಂಪನ್ಮೂಲ ವ್ಯಕ್ತಿಗಳಿಂದ ಅಗತ್ಯ ತರಬೇತಿಯನ್ನು ನೀಡಲಾಗುತ್ತಿದೆ. ಮಹಿಳೆಯರಲ್ಲಿ ಉದ್ಯಮ ಸಾಹಸ ಮನೋಭಾವನೆಯನ್ನು ಬೆಳೆಸಲು, ಆಹಾರ ಮತ್ತು ಪೋಷಕಾಂಶಗಳು, ಅಡುಗೆ ತಯಾರಿಸುವ ವಿಧಾನಗಳು, ಕಾರ್ಯತಂತ್ರಗಳು, ನೈರ್ಮಲ್ಯ ಹಾಗೂ**

ಆರೋಗ್ಯ ಸುರಕ್ಷತೆ, ಲೆಕ್ಕಪತ್ರ ನಿರ್ವಹಣೆ ಸವಾಲುಗಳನ್ನು ಯಶಸ್ವಿಯಾಗಿ ನಿಭಾಯಿಸುವ ತಂತ್ರಗಳ ಬಗ್ಗೆ ಕಾರ್ಯಾಗಾರದಲ್ಲಿ ಹೆಚ್ಚಿನ ಒತ್ತನ್ನು ನೀಡಲಾಗಿದೆ.

ಆಯವ್ಯಯದಲ್ಲಿ ಮೂರು ಕೋಟಿ ರೂ. ಗಳನ್ನು ನೀಡಲಾಗಿದ್ದು ಪ್ರತಿ ಜಿಲ್ಲಾ ಒಕ್ಕೂಟಕ್ಕೆ 10 ಲಕ್ಷ ರೂ. ಗಳ ಬಡ್ಡಿರಹಿತ ಸಾಲ ನೀಡಲಾಗುತ್ತಿದೆ. ಇದರಲ್ಲಿ ವಾಹನ, ಅಡುಗೆ ಪರಿಕರ ಹಾಗೂ ಆಹಾರ ಧಾನ್ಯಗಳನ್ನು ಖರೀದಿಸುವ ಜೊತೆಯಲ್ಲಿ ನಿಭಾಯಿಸಿಕೊಂಡು ಹೋಗಲು ಅವಶ್ಯವಿರುವ ಇತರೆ ಖರ್ಚುಗಳನ್ನು ಈ ಹಣದಲ್ಲೇ ಸರಿದೂಗಿಸಿಕೊಳ್ಳಬೇಕು. ಈಗಾಗಲೇ ಹೆಚ್ಚಿನ ಬೇಡಿಕೆ ಇದ್ದು ಮುಂದಿನ ದಿನಗಳಲ್ಲಿ ಪ್ರತಿ ತಾಲ್ಲೂಕಿಗೆ ಒಂದರಂತೆ ಕ್ಯಾಂಟಿನ್ ತೆರೆಯುವ ಕುರಿತು ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಲು ತೀರ್ಮಾನಿಸಲಾಗಿದೆ.

ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟಗಳು ನಾಲ್ಕುವರೆ ವರ್ಷಗಳಲ್ಲಿ ಪ್ರತಿ ತಿಂಗಳಿಗೆ 18,500 ರೂ. ಗಳಂತೆ ಕಂತಿನಲ್ಲಿ ಹಣವನ್ನು ಹಿಂದಿರುಗಿಸಬೇಕಾಗಿದ್ದು ಬಡ್ಡಿರಹಿತ ಸಾಲವಾಗಿರುತ್ತದೆ. ಮಹಿಳೆಯರು ಆಯಾ ಪ್ರಾದೇಶಿಕತೆಗೆ ಅನುಗುಣವಾಗಿ ಆಹಾರಗಳನ್ನು ತಯಾರಿಸಿ ಮಾರಬಹುದು ಹಾಗೂ ಸಂಚಾರಿ ವಾಹನದಲ್ಲಿ ಸ್ವಸಹಾಯ ಸಂಘಗಳಲ್ಲಿ ತಯಾರಿಸಿರುವ ಗುಡಿ ಕೈಗಾರಿಕೆ ವಸ್ತುಗಳನ್ನು ಸಹ ಮಾರಾಟ ಮಾಡಬಹುದು. ಈ ಯೋಜನೆಯ ಮುಖ್ಯ ಉದ್ದೇಶ ಮಹಿಳೆಯರನ್ನು ಆರ್ಥಿಕವಾಗಿ ಸ್ವತಂತ್ರರನ್ನಾಗಿಸುವುದು.

ಪ್ರಸ್ತುತ ಪ್ರತಿ ಜಿಲ್ಲೆಗೊಂದು ಸವಿರುಚಿ ಸಂಚಾರಿ ಕ್ಯಾಂಟೀನ್‌ಗಳನ್ನು ತೆರೆಯಲಾಗುತ್ತಿದ್ದು, ನವೆಂಬರ್ 19 ರಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿರುವ ರಾಜ್ಯ ಮಟ್ಟದ ಸಮಾರಂಭದಲ್ಲಿ ಮುಖ್ಯಮಂತ್ರಿಗಳು ಈ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡುವರು ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪಂಕಜ, ಉಪ ನಿರ್ದೇಶಕರಾದ ನಾರಾಯಣಸ್ವಾಮಿ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

(ಈ ಸುದ್ದಿಗೆ ಸಂಬಂಧಿಸಿದ ಛಾಯಾಚಿತ್ರಗಳನ್ನು ಲಗತ್ತಿಸಲಾಗಿದೆ)

ಎಸ್‌ಎಂ:ಜೆಡಿ:ಜೆಪಿಆರ್.

<u>ಸಂಖ್ಯೆ 178/298</u>

# ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 11 ( ಕರ್ನಾಟಕ ವಾರ್ತೆ) :

**2018 ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಕುಳಿತುಕೊಳ್ಳುವ ಅಭ್ಯರ್ಥಿಗಳ ನೊಂದಣಿ, ಪರೀಕ್ಷಾ ಶುಲ್ಕ ಹಾಗೂ ನಾಮಿನಲ್ ರೋಲ್ ಪ್ರಸ್ತಾವನೆಗಳನ್ನು ಸಲ್ಲಿಸುವ ದಿನಾಂಕಗಳನ್ನು ವಿಸ್ತರಿಸಲಾಗಿದೆ.**

**ಈ ಹಿನ್ನೆಲೆಯಲ್ಲಿ ಖಾಸಗಿ ಅಭ್ಯರ್ಥಿಗಳಾಗಿ ಜಿಲ್ಲಾ ಉಪ ನಿರ್ದೇಶಕರ ಕಚೇರಿಯಲ್ಲಿ ನೋಂದಣಿ ಮಾಡಿಕೊಳ್ಳಲು ಅಕ್ಟೋಬರ್ 24, ಶಾಲೆಯವರು ಶಾಲಾ/ಖಾಸಗಿ/ಪುನರಾವರ್ತಿತ ಅಭ್ಯರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಿ ಬ್ಯಾಂಕಿಗೆ ಎನ್‌ಇಎಫ್‌ಟಿ ಚಲನ್ ಮೂಲಕ ಜಮೆ ಮಾಡಲು ಅಕ್ಟೋಬರ್ 26 ಹಾಗೂ ನಾಮಿನಲ್ ರೋಲ್ ಪ್ರಸ್ತಾವನೆ ಹಾಗೂ ಬ್ಯಾಂಕ್ ಚಲನ್‌ನ ಮೂಲ ಪ್ರತಿ ಶಾಲೆಗಳಿಂದ ಮಂಡಳಿಗೆ ತಲುಪಿಸಲು ಅಕ್ಟೋಬರ್ 28 ಕ್ಕೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.**

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 179/299

# ಫೆಲೋಶಿಫ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 11 ( ಕರ್ನಾಟಕ ವಾರ್ತೆ) :

**ಕರ್ನಾಟಕ ಯಕ್ಷಗಾನ ಅಕಾಡೆಮಿಯು 2017-18ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಯಡಿ ಅಕಾಡೆಮಿಯ ವ್ಯಾಪ್ತಿಗೆ ಒಳಪಡುವ ಯಕ್ಷಗಾನ ಕ್ಷೇತ್ರದಲ್ಲಿ 5 ತಿಂಗಳ ಕಾಲ ಸಂಶೋಧನಾ ಅಧ್ಯಯನ ಮಾಡಿ ಪ್ರಬಂಧ ಮಂಡಿಸುವವವರಿಗೆ ಫೆಲೋಶಿಪ್ ನೀಡುವ ಯೋಜನೆಯೊಂದನ್ನು ಹಮ್ಮಿಕೊಂಡಿದೆ. ಈ ಸಂಶೋಧನಾ ಕಾರ್ಯಕ್ಕಾಗಿ ಒಬ್ಬ ಸಂಶೋಧನಾ ಅಭ್ಯರ್ಥಿಗೆ 90,000 ರೂ. ಹಾಗೂ ಮಾರ್ಗದರ್ಶಕರ ಗೌರ ಸಂಭಾವನೆ ರೂ 10,000. ಗಳನ್ನು**

ನಿಗದಿಪಡಿಸಿದೆ. ಅರ್ಜಿ ಸಲ್ಲಿಸುವವರು ಪರಿಶಿಷ್ಟ ಪಂಗಡಕ್ಕೆ ಮಾತ್ರ ಸೇರಿದವರಾಗಿರಬೇಕು. ವಯೋಮಿತಿ 45 ವರ್ಷ ಮೀರಿರಬಾರದು.

ಯಕ್ಷಗಾನದ ತೆಂಕುತಿಟ್ಟು, ಬಡಗುತಿಟ್ಟು, ಬಡಾಬಡಗುತಿಟ್ಟು, ತಾಳಮದ್ದಳೆ, ಮೂಡಲಪಾಯ, ಯಕ್ಷಗಾನ ಬೊಂಬೆಯಾಟ, ಯಕ್ಷಗಾನದ ಇತರೆ ಪ್ರಕಾರಗಳು ಸೇರಿದೆ.

ಆಸಕ್ತಿ ಇರುವ ಕನ್ನಡ ಭಾಷಾ ವಿಜ್ಞಾನ, ಜಾನಪದ, ಸಮಾಜ ವಿಜ್ಞಾನ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಮಹಿಳಾ ಅಧ್ಯಯನ, ಇತಿಹಾಸ, ಮಾನವಶಾಸ್ತ್ರ, ಪತ್ರಿಕೋದ್ಯಮ, ಗ್ರಂಥಾಲಯ ಮತ್ತು ಮಾಹಿತಿ ತಂತ್ರಜ್ಞಾನ, ಇಂಗ್ಲೀಷ್, ಹಿಂದಿ ಇತ್ಯಾದಿ ಮಾನವಿಕ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡಿರುವವರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರಿರುವವರು ಆಯ್ಕೆಮಾಡಿಕೊಳ್ಳುವ ಅಧ್ಯಯನದ ವಿಷಯದ ಬಗ್ಗೆ ನಾಲ್ಕು ಪುಟಗಳ ಸಾರಲೇಖ (ಸಾರಾಂಶ) ಹಾಗೂ ತಮ್ಮ ಸಾಧನೆಯ ಕಿರುಪರಿಚಯ ಹಾಗೂ ಜಾತಿ ಪ್ರಮಾಣ ಪತ್ರದೊಂದಿಗೆ ಅರ್ಜಿಯನ್ನು ಅಕ್ಟೋಬರ್ 31 ರೊಳಗಾಗಿ ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಅಕಾಡೆಮಿ, 2ನೇ ಮಹಡಿ, ಚಾಲುಕ್ಯ ವಿಭಾಗ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 2 ಇವರಿಗೆ ಅರ್ಜಿಯನ್ನು ಅಂಚೆ ಮೂಲಕ ಅಥವಾ ಇ–ಮೇಲ್ ಮೂಲಕ ಕಳುಹಿಸಲು ಕೋರಿದೆ. ಫೆಲೋಶಿಪ್ ಅರ್ಜಿ ನಮೂನೆಯನ್ನು ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 180/300

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 11 ( ಕರ್ನಾಟಕ ವಾರ್ತೆ) :

**ಮೀನುಗಾರಿಕೆ, ಯುವಸಬಲೀಕರಣ ಮತ್ತು ಕ್ರೀಡಾ ಸಚಿವ ಪ್ರಮೋದ್ ಮಧ್ವರಾಜ್ ಅವರು ಅಕ್ಟೋಬರ್ 12 ರಂದು ಉಡುಪಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.**

****

ಎಸ್‌ಎಂ;ಜೆಡಿ:ಜಿಪಿಆರ್.